## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸುರಪುರ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:1) ಸರ್ಕಾರದ ಆದೇಶ ಸಂಖ್ಯೆ:ನಅಇ:119:ಗುಅಪ್ರಾ:2009, ದಿ: 02.09.2009

2) ಸುರಪುರ ಯೋಜನಾ ಪ್ರಾಧಿಕಾರದ ಪತ್ರ ಸಂಖ್ಯೆ: ನಯೋಪ್ರಾಸು:ಮ.ಯೋ:2012-13/92-93, ದಿ: 27.02.2013 ಮತ್ತು 11.07.2013

3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂಖ್ಯೆ:ನಗ್ರಾಯೋ: ಗುವಿ(30):ಸುರಪುರ:ಮ.ಯೋ:ಅಂತಿಮ:2013-14ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ: 28-08-2013.

249
5/9/14

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಸುರಪುರ ಪಟ್ಟಣ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಸುರಪುರ ಯೋಜನಾ ಪ್ರಾಧಿಕಾರವು, ಸುರಪುರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1)(2)ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿದೆ.

ಮೇಲೆ ಓದಲಾದ (3)ರಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಕಡತದಲ್ಲಿ ಸುರಪುರ ಪಟ್ಟಣದ ಜನಸಂಖ್ಯೆಯು 2021ರಲ್ಲಿ 82,500ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಸುರಪುರ ನಗರದ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 1269.41ಹೆಕ್ಟೇರ್ ಪ್ರದೇಶವನ್ನು ನಗರದ ಅಭಿವೃದ್ಧಿಗಾಗಿ ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ (12)ರಲ್ಲಿ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರದ ಮುಂದಿನ ಯೋಜಿತ ಬೆಳವಣಿಗೆಗೆ ಪ್ರಸ್ತಾಪಿಸಿರುವ 1269.41 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 641.82 ಹೆಕ್ಟೇರ್ (ಶೇ:50.56), ವಾಣಿಜ್ಯಕ್ಕಾಗಿ 56.70 ಹೆಕ್ಟೇರ್ (ಶೇ. 4.47), ಕೈಗಾರಿಕೆಗಾಗಿ 27.91 ಹೆಕ್ಟೇರ್ (ಶೇ.2.20), ಸಾರ್ವಜನಿಕ:ಅರೆ ಸಾರ್ವಜನಿಕ ಉಪಯೋಗಕ್ಕೆ 104.81 ಹೆಕ್ಟೇರ್ (ಶೇ. 8.26) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 121.46 ಹೆಕ್ಟೇರ್ (ಶೇ. 9.57) ಹಾಗೂ ಸಾರಿಗೆ/ಸಂಪರ್ಕ ವಲಯಕ್ಕೆ 311.22 ಹೆಕ್ಟೇರ್ (ಶೇ.24.51) ನಾಗರೀಕ ಸೌಲಭ್ಯಕ್ಕಾಗಿ 5.49 ಹೆಕ್ಟೇರ್ (ಶೇ.0.43) ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13 (3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ

ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 151 ಗುಅಪ್ರಾ 2013, ದಿನಾಂಕ: 04-09-2014**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸುರಪುರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

**ಷರತ್ತು:**

ಈ ಆದೇಶದ ದಿನಾಂಕದಿಂದ ಎರಡು ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಕೂಡದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
(ವಿ.ರಾಜೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಸದರಿ ಅಧಿಸೂಚನೆಯನ್ನು ರಾಜ್ಯ ಪತ್ರದಲ್ಲಿ ಪ್ರಕಟಿಸಿ ಅದರ ಪ್ರಕಟಿತ ಅಧಿಸೂಚನೆಯ 150 ಪ್ರತಿಗಳನ್ನು ಸರ್ಕಾರಕ್ಕೆ ಕಳುಹಿಸುವಂತೆ ಕೋರಲಾಗಿದೆ.

**ಪ್ರತಿಗಳು:**

1) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
2) ಸದಸ್ಯ ಕಾರ್ಯದರ್ಶಿ, ನಗರ ಯೋಜನಾ ಪ್ರಾಧಿಕಾರ, ಸುರಪುರ.
3) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಯಾದಗಿರಿ.
4) ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
5) ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ರವರ ಆಪ್ತ ಕಾರ್ಯದರ್ಶಿಗಳು.
6) ಸರ್ಕಾರದ ಉಪಕಾರ್ಯದರ್ಶಿಗಳು-2, ನಗರಾಭಿವೃದ್ಧಿ ಇಲಾಖೆ, ರವರ ಆಪ್ತ ಕಾರ್ಯದರ್ಶಿಗಳು.
7) ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.